ಕೊಡುತ್ತೇವೆ. ಮುಂದಿನ ವರ್ಷ ಆ ರೀತಿ ಸರ್ಕಾರದಿಂದ ಅನುದಾನವನ್ನು ಕೊಡುವಂಥ ಕೆಲಸ ಮಾಡುತ್ತೇವೆ.

ಶ್ರೀ ಪ್ರಕಾಶ್ ಖಂಡ್ರೆ : ಈ ಯೋಜನೆಗೆ ನೀರನ್ನು ಎಲ್ಲಿಂದ ತೆಗೆದುಕೊಳ್ಳುತ್ತಿದ್ದೀರಿ?

ಶ್ರೀ ಬಿ.ಬಿ. ಚಿಮ್ಮನಕಟ್ಟಿ : ಕಾರಂಜಾ ಜಲಾಶಯದಿಂದ ನೀರನ್ನು ತೆಗೆದುಕೊಳ್ಳುತ್ತೇವೆ.

ಶ್ರೀ ರಮೇಶ್‌ಕುಮಾರ್ ಪಾಂಡೆ : ಮಾನ್ಯ ಅಧ್ಯಕ್ಷರೆ, ನಮ್ಮ ಬೀದರ್ ಪಟ್ಟಣದ ನೀರು ಸರಬರಾಜು ಯೋಜನೆಯು ಮಂಜೂರಾಗಿ ಒಂಭತ್ತು ವರ್ಷಗಳಾಯಿತು. ಇದನ್ನು ಯಾವಾಗ ಮಾಡುತ್ತೀರಾ?

ಶ್ರೀ ಬಿ.ಬಿ. ಚಿಮ್ಮನಕಟ್ಟಿ : ಬೀದರ್ ಪಟ್ಟಣದ ಯೋಜನೆಯನ್ನು ಈ ವರ್ಷದಲ್ಲಿ ಮುಗಿಸುವ ಕಾರ್ಯಕ್ರಮವಿದೆ. ಈ ಯೋಜನೆ 1990ರಲ್ಲಿ ಪ್ರಾರಂಭವಾಗಿತ್ತು. ಇಲ್ಲಿನ ಕಾಮಗಾರಿ ಬಹಳ ಮಂದಗತಿಯಲ್ಲಿ ನಡೆದರೂ ಸಹ ಇದರ ಬಗ್ಗೆ ಹೆಚ್ಚು ಆಸಕ್ತಿ ವಹಿಸಿ ನಮ್ಮ ಸರ್ಕಾರ ಇದನ್ನು ಮುಗಿಸುವ ಕೆಲಸ ಮಾಡುತ್ತದೆ.

ಬಾಗೇಪಲ್ಲಿ ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆ

200 (1906) : ಶ್ರೀ ಸಂಪಂಗಿ. ಎನ್. (ಬಾಗೇಪಲ್ಲಿ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ಬಾಗೇಪಲ್ಲಿ ಪಟ್ಟಣದಲ್ಲಿ ಕುಡಿಯುವ ನೀರಿನ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಪಟ್ಟಣದಲ್ಲಿ ಇರುವ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರವಾಗಿ ಕರ್ನಾಟಕ ನಗರ ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿಯಿಂದ (ಕೆಯುಡಬ್ಲ್ಯುಎಸ್ ಮತ್ತು ಎಸ್‌ಬಿ) ಹೊಸದಾಗಿ ಕುಡಿಯುವ ನೀರಿನ ಯೋಜನೆಗಳನ್ನು ತೆಗೆದುಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಇ) ಹಾಗಿದ್ದಲ್ಲಿ ಹೊಸ ಯೋಜನೆಗಳನ್ನು ಪ್ರಸಕ್ತ ವರ್ಷದಲ್ಲಿ ತೆಗೆದುಕೊಳ್ಳಲು ಮಂಜೂರಾತಿಯನ್ನು ನೀಡಲಾಗುವುದೇ;

(ಈ) ಹಾಗಿಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು?

ಶ್ರೀ ಬಿ. ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು) :

(ಅ) ಬಂದಿದೆ

(ಆ) ಈ ಪಟ್ಟಣದಲ್ಲಿರುವ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರವಾಗಿ ಕನಸೀಸ ಮತ್ತು ಒ. ಚ. ಮಂಡಲಿಯಿಂದ ಕೊಳವೆ ಬಾವಿಗಳನ್ನು ಮೂಲವಾಗಿಟ್ಟುಕೊಂಡು ತಯಾರಿಸಿದ ಯೋಜನೆಗೆ ಕೇಂದ್ರ ಪುರಸ್ಕೃತ ತ್ವರಿತ ನೀರು ಸರಬರಾಜು ಕಾರ್ಯಕ್ರಮದಡಿ ಕೇಂದ್ರ ಸರ್ಕಾರದ

ಅನುಮೋದನೆಯು ದಿನಾಂಕ 8.2.2000 ರಲ್ಲಿ ದೊರೆತಿದ್ದು ಈ ಯೋಜನೆಗೆ ರಾಜ್ಯ ಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ನೀಡುವ ವಿಷಯ ಪರಿಶೀಲನೆಯಲ್ಲಿದೆ.

(ಇ) ಉದ್ಭವಿಸುವುದಿಲ್ಲ.

(ಈ) ಉದ್ಭವಿಸುವುದಿಲ್ಲ.

ಶ್ರೀ ಎನ್. ಸಂಪಂಗಿ : ಮಾನ್ಯ ಅಧ್ಯಕ್ಷರೆ, ಬಾಗೇಪಲ್ಲಿಯ ಪಟ್ಟಣದ ಬಗ್ಗೆ ಮಾಹಿತಿ ಕೊಟ್ಟಿದ್ದಾರೆ. ಆದರೆ ನನ್ನ ಕ್ಷೇತ್ರದಲ್ಲಿ ಬಾಗೇಪಲ್ಲಿ ಮತ್ತು ಗುಡಿಬಂಡೆ ಎರಡೂ ಬರುತ್ತದೆ. ಇವತ್ತು ಬಾಗೇಪಲ್ಲಿ ಪಟ್ಟಣದ ವಿಚಾರದಲ್ಲಿ ಒಂದು ಉತ್ತರವನ್ನು ಕೊಟ್ಟಿದ್ದಾರೆ. ಆದರೆ 8.2.2000 ರಲ್ಲಿ ಕೇಂದ್ರದಿಂದ ದೊರಕಿರುವ ಆಡಳಿತಾತ್ಮಕ ಅನುಮೋದನೆಯ ವಿಚಾರ ರಾಜ್ಯ ಸರ್ಕಾರದ ಪರಿಶೀಲನೆಯಲ್ಲಿದೆಯೆಂದು ಹೇಳಿದ್ದಾರೆ. ಆದರೆ ನಮ್ಮಲ್ಲಿ ಕುಡಿಯುವುದಕ್ಕೆ ನೀರಿಲ್ಲದೆ ಜನರಿಗೆ ಬಹಳ ತೊಂದರೆಯಾಗಿದೆ. ಎಲ್ಲೋ ಸ್ವಲ್ಪ ನೀರು ಸಿಗುತ್ತಿದ್ದರೆ ಅದರಲ್ಲಿ ಫ್ಲೋರೈಡ್ ಅಂಶ ಜಾಸ್ತಿಯಾಗಿ ಆರೋಗ್ಯಕ್ಕೆ ಹಾನಿಯಾಗುತ್ತಿದೆ. ಅಲ್ಲಿ ಕುಡಿಯುವುದಕ್ಕೆ ನೀರೇ ಇಲ್ಲ. ಅಲ್ಲಿನ ಜನರು ಸ್ನಾನ ಮಾಡುವುದನ್ನು ಮರೆತೇ ಬಿಟ್ಟಿದ್ದಾರೆ. ಮೂರು ದಿವಸಕ್ಕೆ ಒಂದು ಸಲ ನೀರನ್ನು ಕೊಡುತ್ತಿದ್ದಾರೆ. ಅಲ್ಲಿಗೆ ನೀರನ್ನು ಕೊಡುವ ವಿಚಾರದಲ್ಲಿ ಸರ್ಕಾರ ಗಮನ ಹರಿಸಿಲ್ಲ. ನಮ್ಮಲ್ಲಿರುವ ಪ್ರದೇಶದಲ್ಲಿ ಮಳೆ ಇಲ್ಲ, ಕೆರೆಗಳಲ್ಲಿ ನೀರಿಲ್ಲ, ಹಾಗಿದ್ದಮೇಲೆ ಅಂತರ್ಜಲ ಮಟ್ಟ ಬತ್ತಿ ಹೋಗಿ ಕುಡಿಯಲು ನೀರಿಲ್ಲದಂಥ ಪರಿಸ್ಥಿತಿಯಾಗಿದೆ, ಜನ ಮತ್ತು ಜಾನುವಾರುಗಳಿಗೆ ಕುಡಿಯಲು ನೀರಿಲ್ಲ. ಆದ್ದರಿಂದ ಕುಡಿಯುವ ನೀರನ್ನು ಒದಗಿಸಲು ತಕ್ಷಣ ಏನು ಕ್ರಮ ತೆಗೆದುಕೊಳ್ಳುತ್ತೀರಾ ಎಂದು ನಾನು ಮಾನ್ಯ ಸಚಿವರಲ್ಲಿ ಕೇಳಿಕೊಳ್ಳುತ್ತಿದ್ದೇನೆ.

ಶ್ರೀ ಬಿ. ಬಿ. ಚಿಮ್ಮನಕಟ್ಟಿ : ಮಾನ್ಯ ಅಧ್ಯಕ್ಷರೆ, ಬಾಗೇಪಲ್ಲಿ ಪಟ್ಟಣಕ್ಕೆ ಈಗಾಗಲೆ ಕೊಳವೆ ಬಾವಿಗಳ ಮೂಲಕ ಕುಡಿಯುವ ನೀರನ್ನು ಒದಗಿಸುವ ಯೋಜನೆ ಇದೆ. ತಲಾ 70 ಲೀಟರ್ ನೀರನ್ನೇನು ಕೊಡಬೇಕಾಗಿತ್ತು ಅದಕ್ಕೆ ಬದಲಾಗಿ ನಾವು ಸುಮಾರು 40 ಲೀಟರ್ ನೀರನ್ನು ಸರಬರಾಜು ಮಾಡುತ್ತಿದ್ದೇವೆ. ಇದನ್ನು ನೋಡಿದಾಗ ಇಲ್ಲಿ ಕುಡಿಯುವ ನೀರಿಗೆ ಬಹಳ ತೊಂದರೆ ಇದೆಯೆಂದು ನಮಗೆ ಅನ್ನಿಸುತ್ತದೆ. ತ್ವರಿತ ನೀರು ಸರಬರಾಜು ಯೋಜನೆಯ ಅಡಿಯಲ್ಲಿ ಈ ಪಟ್ಟಣಕ್ಕೆ ನೀರನ್ನು ಒದಗಿಸುವ ಬಗ್ಗೆ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿತ್ತು. ಇದಕ್ಕೆ 8.2.2000 ರಲ್ಲಿ ಕೇಂದ್ರ ಸರ್ಕಾರದವರು ಮಂಜೂರಾತಿಯನ್ನು ನೀಡಿದ್ದಾರೆ. ಇದರಲ್ಲಿ 50 ಪರ್‌ಸೆಂಟ್ ಕೇಂದ್ರ ಸರ್ಕಾರ ಉಳಿದ 50 ಪರ್‌ಸೆಂಟ್ ರಾಜ್ಯ ಸರ್ಕಾರ ಗ್ರಾಂಟ್ಸ್‌ನ್ನು ಕೊಡಬೇಕು. ಈ ಯೋಜನೆಯ ಮಂಜೂರಾತಿಗಾಗಿ ಇದು ದಿನಾಂಕ 29.11.1999 ರಂದು ನಮ್ಮ ಸರ್ಕಾರಕ್ಕೆ ಬಂದಿದೆ. ಆದಷ್ಟು ಬೇಗ ಅಂದರೆ ಎಂಟು ದಿವಸಗಳ ಒಳಗಾಗಿ ಇದಕ್ಕೆ ಮಂಜೂರಾತಿಯನ್ನು ನೀಡಲು ನಾನು ಪ್ರಯತ್ನ ಮಾಡುತ್ತೇನೆ.

ಶ್ರೀ ಎನ್. ಸಂಪಂಗಿ : ಮಾನ್ಯ ಸಚಿವರಿಗೆ ಧನ್ಯವಾದಗಳು. ಆದಷ್ಟು ಬೇಗನೆ ಇದರ ಬಗ್ಗೆ ಸರ್ಕಾರದವರು ಒಂದು ನಿರ್ಣಯವನ್ನು ಮಾಡಬೇಕಾಗುತ್ತದೆ.

ಅಧ್ಯಕ್ಷರು : ಒಂದು ವಾರದೊಳಗಾಗಿ ನೀರು ಪಡೆಯಲಿಕ್ಕೆ ನೀವು ಆದೃಷ್ಟ ಮಾಡಿದ್ದೀರಿ. ಸರ್ಕಾರದವರು ಅದನ್ನು ಮಾಡುತ್ತಾರೆ ಬಿಡಿ.

ಶ್ರೀ ಎನ್. ಸಂಪಂಗಿ : ಮಾನ್ಯ ಅಧ್ಯಕ್ಷರೆ, ಇವತ್ತು ನಮ್ಮ ಬಾಗೇಪಲ್ಲಿ ಪಟ್ಟಣದಲ್ಲಿ ಐದು ಬೋರ್‌ವೆಲ್‌ಗಳನ್ನು ಹಾಕಿದ್ದಾರೆ. ಆ ಐದು ಬೋರ್‌ವೆಲ್‌ಗಳಲ್ಲಿ, ಒಂದೊಂದು ಬೋರ್‌ವೆಲ್‌ನಲ್ಲಿ ಒಂದು ಇಂಚು ನೀರು ಬರುತ್ತಿದೆ. ಇವತ್ತು ಅಲ್ಲಿ ಕುಡಿಯುವ ನೀರಿಗೆ ಬಹಳ ಸಮಸ್ಯೆಯಾಗಿದೆ. ಇವತ್ತು ಅಲ್ಲಿ ಜನ ಊರು ಬಿಟ್ಟು ಹೋಗುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಆದ್ದರಿಂದ ಸರ್ಕಾರ ತಕ್ಷಣವೇ ಅಲ್ಲಿನ ನೀರಿನ ಸಮಸ್ಯೆಯನ್ನು ಬಗೆಹರಿಸಲು ಗಮನ ಹರಿಸಬೇಕಾಗುತ್ತದೆ. ಫ್ಲೋರೈಡ್ ವಿಚಾರದಲ್ಲಿ ಒಂದೆರಡು ಅಂಶಗಳನ್ನು ನಾನು ತಮ್ಮ ಗಮನಕ್ಕೆ ತರುತ್ತಿದ್ದೇನೆ. ಇವತ್ತು ಸುಮಾರು 60 ಸಾವಿರ ಜನರ ಆರೋಗ್ಯ ಹದಗೆಟ್ಟಿದೆ. ಸಣ್ಣ ಮಕ್ಕಳು ಸೇರಿದಂತೆ ಎಲ್ಲರಿಗೂ ಹಲ್ಲು ನೋವು, ಕೈ ಕಾಲುಗಳ ನೋವು ಮತ್ತು ವಾಸಿಯಾಗದಂತಹ ಗಾಯಗಳು ಆಗುತ್ತಿವೆ. ಬಾಗೇಪಲ್ಲಿ ಮತ್ತು ಗುಡಿಬಂಡೆ ಪಟ್ಟಣಗಳಲ್ಲಿ ಈ ರೀತಿಯ ಪರಿಸ್ಥಿತಿ ನಿರ್ಮಾಣವಾಗಿದೆ. ನೀರಿನಲ್ಲಿ ಫ್ಲೋರೈಡ್ ಅಂಶ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದ್ದರೂ ಕೂಡ, ಅದನ್ನು ಯಾವ ರೀತಿಯಲ್ಲಿ ಹತೋಟಿಗೆ ತರಬೇಕೆಂಬ ಬಗ್ಗೆ ಸರ್ಕಾರ ಇವತ್ತು ಗಮನ ಹರಿಸಿಲ್ಲ. ನಾವು ಗಡಿ ಪ್ರದೇಶದಲ್ಲಿದ್ದೇವೆ. ಈ ಕಡೆ ಆಂಧ್ರಪ್ರದೇಶದವರ ಹಾವಳಿ ಇದ್ದರೆ, ಆ ಕಡೆ ಕರ್ನಾಟಕ ರಾಜ್ಯದಿಂದಲೂ ದೂರವಾಗಿರತಕ್ಕಂಥ ಇಂತಹ ಗಡಿನಾಡು ಪ್ರದೇಶಗಳಲ್ಲಿ ಸರ್ಕಾರ ಸರಿಯಾದ ಗಮನ ಹರಿಸದೇ ಇರುವುದರಿಂದ ನಾವು ಇವತ್ತು ಯಾವ ಪರಿಸ್ಥಿತಿಯಲ್ಲಿದ್ದೇವೆ ಎಂಬುದನ್ನು ತಾವೇ ಅರ್ಥ ಮಾಡಿಕೊಳ್ಳಬಹುದಾಗಿದೆ. ಫ್ಲೋರೈಡ್ ಅಂಶ ಹೆಚ್ಚಿಗೆ ಇರುವ ಬಗ್ಗೆ ನಾನು ಕಳೆದ ವಿಧಾನ ಸಬೆಯಲ್ಲೂ ಕೂಡ ಪ್ರಸ್ತಾಪ ಮಾಡಿ ಅದರ ಬಗ್ಗೆ ಸರ್ಕಾರ ಆಸಕ್ತಿ ವಹಿಸಿ ಕ್ರಮ ತೆಗೆದುಕೊಳ್ಳಬೇಕೆಂದು ಆಗ್ರಹಿಸಿದ್ದೆ. ಆದರೆ ಫ್ಲೋರೈಡ್ ಅನ್ನು ಹತೋಟಿಗೆ ತರುವಂತಹ ಯಾವ ರೀತಿಯಾದಂತಹ ಕಾರ್ಯಕ್ರಮಗಳನ್ನೂ ಕೂಡ ಇವತ್ತು ಸರ್ಕಾರದವರು ಹಮ್ಮಿಕೊಂಡಿಲ್ಲ. ಅದರ ಬಗ್ಗೆ ಸರ್ಕಾರ ಗಮನಹರಿಸಿ ಆದಷ್ಟು ಬೇಗ ಫ್ಲೋರೈಡ್‌ನ ಹೆಚ್ಚುವರಿ ಅಂಶ ನೀರಿನಲ್ಲಿ ಇರುವುದನ್ನು ತೆಗೆದು ಹಾಕುವ ಬಗ್ಗೆ ಯಾವೊಂದು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ಎಂಬುದನ್ನು ತಿಳಿಸಬೇಕೆಂದು ಕೋರಿ ನನ್ನ ಮಾತುಗಳನ್ನು ಮುಗಿಸುತ್ತೇನೆ.

ಶ್ರೀ ಬಿ. ಬಿ. ಚಿಮ್ಮನಕಟ್ಟಿ : ಸರ್ಕಾರ ಅದರ ಬಗ್ಗೆ ಪರಿಶೀಲಿಸುತ್ತಿದೆ. ಜನರಿಗೆ ಫ್ಲೋರೈಡ್ ಅಂಶದಿಂದ ತೊಂದರೆಯಾಗದ ರೀತಿಯಲ್ಲಿ ಸರ್ಕಾರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತದೆ ಎಂದು ಮಾನ್ಯ ಸದಸ್ಯರಿಗೆ ತಿಳಿಸಬಯಸುತ್ತೇನೆ.

ಶ್ರೀ ಹೆಚ್. ಎನ್. ಶಂಕರಲಿಂಗೇಗೌಡ : ಮಾನ್ಯ ಅಧ್ಯಕ್ಷರೆ, ಫ್ಲೋರೈಡ್ ಅಂಶ ಜಾಸ್ತಿಯಾಗಿರುವ ಬೋರ್‌ವೆಲ್‌ಗಳ ನೀರನ್ನು ಕುಡಿಯುವುದರಿಂದ ಕಿಡ್ನಿಗೆ ಡ್ಯಾಮೇಜ್ ಆಗುತ್ತದೆ ಎಂದು ವೈದ್ಯಕೀಯ ವರದಿಗಳಿಂದ ದೃಢಪಟ್ಟಿದೆ. ಸರ್ಕಾರ ಈಗಲಾದರೂ ಇದರ ಬಗ್ಗೆ ಎಚ್ಚೆತ್ತುಕೊಳ್ಳಬೇಕು.

ಅಧ್ಯಕ್ಷರು : ಮಾನ್ಯ ಸದಸ್ಯರು ಕಿಡ್ನಿ ಫೇಲ್ಯೂರ್ ಆಗುವ ಅವಕಾಶಗಳಿವೆ ಎಂದು ಹೇಳುತ್ತಿದ್ದಾರೆ. ಆದ್ದರಿಂದ ಇದರ ಬಗ್ಗೆ ಮಾನ್ಯ ಸಚಿವರು ಜರೂರಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡರೆ ಒಳ್ಳೆಯದು.

ಶ್ರೀ ಹೆಚ್. ಎನ್. ಶಂಕರಲಿಂಗೇಗೌಡ : ಮಾನ್ಯ ಸಚಿವರು ಈ ವಿಷಯದ ಬಗ್ಗೆ ಒಂದು ವರದಿಯನ್ನು ತರಿಸಿಕೊಂಡು ಯಾವ ಯಾವ ಬೋರ್‌ವೆಲ್‌ಗಳಲ್ಲಿ ಫ್ಲೋರೈಡ್ ಅಂಶ ಜಾಸ್ತಿಯಿದೆಯೋ ಅಂತಹವುಗಳನ್ನು ಮುಚ್ಚುವಂತಹ ಕೆಲಸವನ್ನು ಮಾಡಬೇಕೆಂದು ಕೋರುತ್ತೇನೆ.

ಶ್ರೀ ಬಿ. ಬಿ. ಚಿಮ್ಮನಕಟ್ಟಿ : ಸರ್ಕಾರ ಅದರ ಬಗ್ಗೆ ಪರಿಶೀಲನೆ ಮಾಡುತ್ತದೆ.

ಪುರಸಭೆಗಳ ವ್ಯಾಪ್ತಿಯಲ್ಲಿ ಬರುವ ಅನಧಿಕೃತ ಮನೆಗಳನ್ನು ಸಕ್ರಮಗೊಳಿಸುವ ಬಗ್ಗೆ.

203 (1908) : ಶ್ರೀ ಮಹದೇವ ಪ್ರಸಾದ್ ಹೆಚ್. ಎಸ್. (ಗುಂಡ್ಲುಪೇಟೆ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ಪುರಸಭೆ ವ್ಯಾಪ್ತಿಯಲ್ಲಿ ಅಕ್ರಮವಾಗಿ ಮನೆ, ಗುಡಿಸಲು ಹಾಕಿಕೊಂಡಿರುವವರಿಗೆ ಸಕ್ರಮಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ;

(ಆ) ಹಾಗಿದ್ದರೆ, ಇದಕ್ಕೆ ಸಮಿತಿ ರಚಿಸಲಾಗಿದೆಯೇ;

(ಇ) ಗುಂಡ್ಲುಪೇಟೆ ಪುರಸಭೆ ವ್ಯಾಪ್ತಿಯಲ್ಲಿ ಅಕ್ರಮವಾಗಿ ಮನೆ ನಿರ್ಮಿಸಿಕೊಂಡಿರುವವರ ಸಂಖ್ಯೆ ಎಷ್ಟು;

(ಈ) ಇವುಗಳನ್ನು ಸಕ್ರಮಗೊಳಿಸಲು ಕ್ರಮ ಕೈಗೊಳ್ಳಲಾಗಿದೆಯೇ?

ಶ್ರೀ ಬಿ. ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು) :

(ಅ) ಹೌದು.

(ಆ) ಕರ್ನಾಟಕ ನಗರ ಪ್ರದೇಶಗಳಲ್ಲಿನ ಅನಧಿಕೃತ ನಿರ್ಮಾಣಗಳನ್ನು ಸಕ್ರಮಗೊಳಿಸುವ (ತಿದ್ದುಪಡಿ) ಕಾಯ್ದೆ 1995ರ ಕಲಂ 6ರ ಉಪಕಲಂ (1)ರ ಅಡಿಯಲ್ಲಿ ಸಕ್ಷಮ ಪ್ರಾಧಿಕಾರಿಗಳನ್ನು ನೇಮಿಸಲಾಗಿದೆ.

(ಇ) 93

(ಈ) ಸಕ್ರಮಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಶ್ರೀ ಹೆಚ್. ಎಸ್. ಮಹದೇವ ಪ್ರಸಾದ್ : ಮಾನ್ಯ ಅಧ್ಯಕ್ಷರೇ, ಪುರಸಭೆ ವ್ಯಾಪ್ತಿಯಲ್ಲಿ ಅಕ್ರಮವಾಗಿ ಮನೆ, ಗುಡಿಸಲು ಹಾಕಿಕೊಂಡಿರುವವರಿಗೆ ಸಕ್ರಮಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ ಎಂಬ ನನ್ನ ಪ್ರಶ್ನೆಗೆ ಮಾನ್ಯ ಸಚಿವರು 'ಹೌದು' ಎಂದು ಉತ್ತರಿಸಿದ್ದಾರೆ. ಅದಕ್ಕಾಗಿ 1995ರ ಕಾಯ್ದೆಯ ಕಲಂ - 6ರ ಉಪ - ಕಲಂ (1)ರ ಅಡಿಯಲ್ಲಿ ಸಕ್ಷಮ ಪ್ರಾಧಿಕಾರಗಳನ್ನೂ ಕೂಡ ರಚಿಸಲಾಗಿದೆ ಎಂದು ಮಾನ್ಯ ಸಚಿವರು ತಿಳಿಸಿರುತ್ತಾರೆ. 1995ರಲ್ಲೇ ಸಕ್ಷಮ ಪ್ರಾಧಿಕಾರ ರಚಿಸಿ, ಅಕ್ರಮವಾಗಿ ಮನೆ, ಗುಡಿಸಲು ಹಾಕಿಕೊಂಡಿರುವವರಿಂದ ಅರ್ಜಿಗಳನ್ನೂ ಕೂಡ ಸ್ವೀಕರಿಸಲಾಗಿದೆ. ಆದರೆ ಸುಮಾರು 5-6 ವರ್ಷಗಳಾದರೂ ಕೂಡ